**All India Radio: Bangalore**
**National Bulletin In Kannada**
**28.01.2025 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

೧. ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಒಡಿಶಾ ಮತ್ತು ಉತ್ತರಾಖಂಡಕ್ಕೆ ಭೇಟಿ. ಒಡಿಶಾದಲ್ಲಿ ಮೇಕ್ ಇನ್ ಒಡಿಶಾ ಕಾನ್ಕ್ಲೇವ್ ಹಾಗೂ ಉತ್ತರಾಖಂಡದಲ್ಲಿ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಚಾಲನೆ

೨. ಮಹಾಕುಂಭ ಮೇಳದಲ್ಲಿ ನಾಳೆ ಮೌನಿ ಅಮಾವಾಸ್ಯೆ ಪ್ರಯುಕ್ತ ಪವಿತ್ರ ಸ್ನಾನಕ್ಕಾಗಿ ಸಾವಿರಾರು ಭಕ್ತರ ಆಗಮನ; ಯಾತ್ರಾರ್ಥಿಗಳಿಗೆ ಉತ್ತಮ ಆರೋಗ್ಯ ವ್ಯವಸ್ಥೆ ಕಲ್ಪಿಸಲು ಸರ್ಕಾರದಿಂದ ಸಿದ್ಧತೆ

೩. ಕ್ರಿಕೆಟ್: ರಾಜ್‌ಕೋಟ್‌ನಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರನೇ ಟಿ - ೨೦ ಕ್ರಿಕೆಟ್ ಪಂದ್ಯ; ರಾತ್ರಿ ೭ ಗಂಟೆಗೆ ಪಂದ್ಯ ಆರಂಭ

೪. ಒಡಿಶಾದ ರೂರ್ಕೆಲಾದ ಬಿರ್ಸಾ ಮುಂಡಾ ಹಾಕಿ ಸ್ಟೇಡಿಯಂನಲ್ಲಿ ನಡೆದ ಪುರುಷರ ಹಾಕಿ ಇಂಡಿಯಾ ಲೀಗ್‌ನಲ್ಲಿ ಸೂರ್ಮಾ ಹಾಕಿ ಕ್ಲಬ್‌ಗೆ ವೇದಾಂತ ಕಳಿಂಗ ಲ್ಯಾನ್ಸರ್ಸ್ ವಿರುದ್ಧ ಗೆಲುವು

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಒಡಿಶಾ ಮತ್ತು ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಅವರು ಬೆಳಿಗ್ಗೆ ೧೧ ಗಂಟೆಗೆ ಭುವನೇಶ್ವರದ ಜನತಾ ಮೈದಾನದಲ್ಲಿ ಉತ್ಕರ್ಷ್ ಒಡಿಶಾ - ಮೇಕ್ ಇನ್ ಒಡಿಶಾ ಕಾನ್ಕ್ಲೇವ್ ೨೦೨೫ನ್ನು ಉದ್ಘಾಟಿಸಲಿದ್ದಾರೆ.

ನಂತರ ಅವರು ಉತ್ತರಾಖಂಡದ ಡೆಹ್ರಾಡೂನ್‌ಗೆ ಪ್ರಯಾಣ ಬೆಳೆಸಲಿದ್ದು, ಸಂಜೆ ೬ ಗಂಟೆಗೆ ೩೮ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ.

ಪ್ರಧಾನಮಂತ್ರಿಯವರು ಭುವನೇಶ್ವರದಲ್ಲಿ ಉತ್ಕರ್ಷ್ ಒಡಿಶಾ ಮೇಕ್ ಇನ್ ಒಡಿಶಾ ಸಮಾವೇಶ ೨೦೨೫ನ್ನು ಉದ್ಘಾಟಿಸಲಿದ್ದು, ಈ ಸಮಾವೇಶವು ಒಡಿಶಾ ಸರ್ಕಾರವು ಆಯೋಜಿಸುತ್ತಿರುವ ಪ್ರಮುಖ ಜಾಗತಿಕ ಹೂಡಿಕೆ ಶೃಂಗಸಭೆಯು ಒಡಿಶಾ ರಾಜ್ಯವನ್ನು ಪೂರ್ವೋದಯ ದೃಷ್ಟಿಕೋನದ ನಿರೂಪಕ ಎಂದು ಪ್ರತಿಬಿಂಬಿಸಲಿದ್ದು, ಭಾರತದ ಪ್ರಮುಖ ಹೂಡಿಕೆ ತಾಣ ಹಾಗೂ ಕೈಗಾರಿಕಾ ಕೇಂದ್ರವಾಗಿ ಸ್ಥಾಪಿಸುವ ಗುರಿಯನ್ನು ಹೊಂದಿದೆ.

ಉತ್ತಮ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವಲ್ಲಿ ರಾಜ್ಯದ ಸಾಧನೆಗಳನ್ನು ಎತ್ತಿ ತೋರಿಸುವ ಮೇಕ್ ಇನ್ ಒಡಿಶಾ ವಸ್ತುಪ್ರದರ್ಶನವನ್ನೂ ಕೂಡಾ ಪ್ರಧಾನಿಯವರು ಉದ್ಘಾಟಿಸಲಿದ್ದಾರೆ. ಈ ಸಮಾವೇಶವು ಇಂದು ಮತ್ತು ನಾಳೆ ನಡೆಯಲಿದೆ.

ಇದು ಉದ್ಯಮದ ನಾಯಕರು, ಹೂಡಿಕೆದಾರರು ಮತ್ತು ನೀತಿ ನಿರೂಪಕರಿಗೆ ಸಂಯೋಜಿತ ವೇದಿಕೆಯನ್ನು ಒದಗಿಸಲಿದೆ.

ಒಡಿಶಾ ರಾಜ್ಯವನ್ನು ಆದ್ಯತೆಯ ಹೂಡಿಕೆ ತಾಣವಾಗಿ ನೀಡುವ ಅವಕಾಶಗಳ ಬಗ್ಗೆ ಚರ್ಚಿಸಲು ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಈ ಸಮಾವೇಶವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ನಾಯಕರ ದುಂಡುಮೇಜಿನ ಸಭೆಗಳು, ವಲಯ ಅಧಿವೇಶನಗಳು, ಬಿ೨ಬಿ ಸಭೆಗಳು ಮತ್ತು ನೀತಿ ಚರ್ಚೆಗಳನ್ನು ಆಯೋಜಿಸಲಿದ್ದು, ವಿಶ್ವದಾದ್ಯಂತದ ಹೂಡಿಕೆದಾರರನ್ನು ಆಕರ್ಷಿಸುವ ವೇದಿಕೆಯಾಗಿದೆ.

ಎರಡು ದಿನಗಳ ಸಮಾವೇಶದಲ್ಲಿ ೨೦ ವಿದೇಶಿಯರು ಸೇರಿದಂತೆ ೭ ಸಾವಿರದ ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಒಡಿಶಾ ಅತ್ಯಂತ ದೊಡ್ಡ ವ್ಯಾಪಾರ ಸಮಾವೇಶವನ್ನು ಆಯೋಜಿಸಲು ಸಕಲ ಸಿದ್ಧತೆ ಕೈಗೊಂಡಿದೆ. ಸಮಾವೇಶದಲ್ಲಿ ೧೦೦ಕ್ಕೂ ಹೆಚ್ಚು ಒಪ್ಪಂದಗಳಿಗೆ ಸಹಿ ಹಾಕಲಾಗುವುದು. ಇದು ೩೩ ಲಕ್ಷ ಜನರಿಗೆ ಉದ್ಯೋಗವನ್ನು ಸೃಷ್ಟಿಸುವ ಸಾಮರ್ಥ್ಯವನ್ನು ಹೊಂದಿದೆ.

ಪ್ರಧಾನಮಂತ್ರಿಯವರು ಇಂದು ಡೆಹ್ರಾಡೂನ್‌ನಲ್ಲಿ ೩೮ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ. ಜನವರಿ ೨೮ರಿಂದ ಫೆಬ್ರವರಿ ೧೪ರವರೆಗೆ ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ಈ ಕ್ರೀಡಾಕೂಟವು ನಡೆಯಲಿದೆ. ಉತ್ತರಾಖಂಡದ ರಜತ ಮಹೋತ್ಸವದ ಸಂದರ್ಭದಲ್ಲಿ ಈ ರಾಷ್ಟ್ರೀಯ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ.

೩೬ ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶವು ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ.

೧೭ ದಿನಗಳ ಕಾಲ ೩೫ ಕ್ರೀಡಾ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಇವುಗಳಲ್ಲಿ ೩೩ ಕ್ರೀಡೆಗಳಿಗೆ ಪದಕಗಳನ್ನು ನೀಡಲಾಗುವುದು, ಅಲ್ಲದೆ ಎರಡು ಪ್ರದರ್ಶನ ಕ್ರೀಡೆಗಳನ್ನೂ ಆಯೋಜಿಸಲಾಗುವುದು. ಯೋಗ ಮತ್ತು ಮಲ್ಲಕಂಬವನ್ನು ಮೊದಲ ಬಾರಿಗೆ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸೇರಿಸಲಾಗಿದೆ. ಈ ಕ್ರೀಡಾಕೂಟದಲ್ಲಿ ೧೦,೦೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ.

ಸುಸ್ಥಿರತೆಯ ಮೇಲೆ ಗಮನವನ್ನು ಕೇಂದ್ರೀಕರಿಸಿ, ಈ ವರ್ಷದ ರಾಷ್ಟ್ರೀಯ ಕ್ರೀಡಾಕೂಟದ ಶೀರ್ಷಿಕೆಯನ್ನು "ಗ್ರೀನ್ ಗೇಮ್ಸ್" ಎಂದು ನಿರ್ಧರಿಸಲಾಗಿದೆ. ಕ್ರೀಡಾ ಅರಣ್ಯ ಎಂದು ಕರೆಯಲ್ಪಡುವ ವಿಶೇಷ ಉದ್ಯಾನವನವನ್ನು ಈ ಸ್ಥಳದಲ್ಲಿ ಅಭಿವೃದ್ಧಿಪಡಿಸಲಾಗುವುದು. ಈ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸುವ ಅತಿಥಿಗಳು ಮತ್ತು ಕ್ರೀಡಾಪಟುಗಳು ೧೦,೦೦೦ಕ್ಕೂ ಹೆಚ್ಚು ಸಸಿಗಳನ್ನು ನೆಡಲಿದ್ದಾರೆ. ಕೇಂದ್ರ ಸಚಿವರು, ಭಾರತೀಯ ಒಲಿಂಪಿಕ್ ಸಂಘ ಮತ್ತು ರಾಷ್ಟ್ರೀಯ ಆಟಗಾರರು ಸೇರಿದಂತೆ ವಿವಿಧ ಅತಿಥಿಗಳು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಭಾರತೀಯ ಒಲಿಂಪಿಕ್ ಸಂಘದ ಅಧ್ಯಕ್ಷೆ ಪಿ.ಟಿ. ಉಷಾ ಈಗಾಗಲೇ ಡೆಹ್ರಾಡೂನ್‌ಗೆ ಆಗಮಿಸಿದ್ದಾರೆ. ಅವರನ್ನು ರಾಜ್ಯದ ಕ್ರೀಡಾ ಸಚಿವೆ ರೇಖಾ ಆರ್ಯ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು.

ಉದ್ಘಾಟನೆಗೆ ಎಲ್ಲಾ ಸಿದ್ಧತೆಗಳು ನಡೆದಿದ್ದು, ಮುಂದಿನ ತಿಂಗಳ ೧೪ ರವರೆಗೆ ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ರಾಷ್ಟ್ರೀಯ ಕ್ರೀಡಾಕೂಟವನ್ನು ನಡೆಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ೩೫ ಪಂದ್ಯಗಳ ಒಟ್ಟು ೪೭ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ೨೦೨೫-೨೬ನೇ ಹಣಕಾಸು ವರ್ಷದ ಕೇಂದ್ರ ಬಜೆಟ್ ಅನ್ನು ಫೆಬ್ರವರಿ ೧ ರಂದು ಮಂಡಿಸಲಿದ್ದಾರೆ.

ಮಂಬರುವ ಆಯವ್ಯಯ ಸರ್ಕಾರದ ಆರ್ಥಿಕ ಆದ್ಯತೆಗಳನ್ನು, ಹಣಕಾಸಿನ ಕಾರ್ಯ ತಂತ್ರಗಳನ್ನು ಅನಾವರಣಗೊಳಿಸಲು ನಿರೀಕ್ಷಿಸಲಾಗಿದೆ.

ಈ ಬಾರಿ ಸರ್ಕಾರವು ದೇಶದಲ್ಲಿ ದೃಢವಾದ ಮೂಲಸೌಕರ್ಯ ಮತ್ತು ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಒತ್ತು ನೀಡುವ ಮೂಲಕ ಬೆಳವಣಿಗೆ, ಉದ್ಯೋಗ ಸೃಷ್ಟಿ ಮತ್ತು ಹಣಕಾಸಿನ ವಿಷಯದ ಮೇಲೆ ಕೇಂದ್ರೀಕರಿಸುತ್ತದೆ ಎಂದು ತಜ್ಞರು ಮತ್ತು ನಾಗರಿಕರು ನಿರೀಕ್ಷಿಸುತ್ತಿದ್ದಾರೆ.

****************

'ಒಂದು ರಾಷ್ಟ್ರ ಒಂದು ಚುನಾವಣೆ' ಅಡಿಯಲ್ಲಿ ಏಕಕಾಲದಲ್ಲಿ ಚುನಾವಣೆಗಳನ್ನು ನಡೆಸುವ ಅಗತ್ಯವನ್ನು ಒತ್ತಿ ಹೇಳಿರುವ ಪ್ರಧಾನಿ ನರೇಂದ್ರ ಮೋದಿ, ಯುವಜನರು ಈ ಬಗ್ಗೆ ವಿಸ್ತೃತ ಚರ್ಚೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

ಧ್ವನಿ: ಪ್ರಧಾನಿ ಮೋದಿ

ನವದೆಹಲಿಯ ಕಾರ್ಯಪ್ಪ ಪರೇಡ್ ಮೈದಾನದಲ್ಲಿ ನಿನ್ನೆ ನಡೆದ ವಾರ್ಷಿಕ ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್-ಎನ್‌ಸಿಸಿ ರ್‍ಯಾಲಿಯನ್ನುದ್ದೇಶಿಸಿ ಪ್ರಧಾನಮಂತ್ರಿ ಮಾತನಾಡಿದರು.

’ಯುವ ಶಕ್ತಿ, ವಿಕಸಿತ ಭಾರತ’ ಎಂಬುದು ಈ ವರ್ಷದ ಎನ್‌ಸಿಸಿ ಪಿಎಂ ರ್‍ಯಾಲಿಯ ಧ್ಯೇಯವಾಕ್ಯವಾಗಿದೆ.

****************

ವಿಶ್ವದ ಅತಿದೊಡ್ಡ ಧಾರ್ಮಿಕ ಮತ್ತು ಮಾನವೀಯ ಕಾರ್ಯಕ್ರಮವಾದ ಮಹಾ ಕುಂಭಮೇಳವನ್ನು ನೆಲದಿಂದ ಮಾತ್ರವಲ್ಲದೆ ಬಾಹ್ಯಾಕಾಶದಿಂದಲೂ ಸೆರೆಹಿಡಿಯಲಾಗುತ್ತಿದೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಿಂದ ಮಹಾಕುಂಭ ಮೇಳದ ರಾತ್ರಿಯ ಅದ್ಭುತ ಚಿತ್ರಗಳನ್ನು ಸೆರೆಹಿಡಿದಿದೆ. ಈ ಚಿತ್ರಗಳಲ್ಲಿ, ಮಹಾ ಕುಂಭ ಮೇಳ ಮತ್ತು ಡೇರೆ ನಗರದ ಅದ್ಭುತ ನೋಟ ಕಂಡುಬಂದಿದೆ.

ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದ ಚಿತ್ರಗಳು ಗಂಗಾ ನದಿಯ ದಡದಲ್ಲಿ ದೀಪಗಳಿಂದ ಪ್ರಜ್ವಲಿಸುತ್ತಿರುವ ವಿಶ್ವದ ಅತಿದೊಡ್ಡ ಮಾನವ ಸಭೆಯನ್ನು ತೋರಿಸುತ್ತವೆ. ಈ ಚಿತ್ರಗಳನ್ನು ISSನ ಗಗನಯಾತ್ರಿ ಡಾನ್ ಪೆಟ್ಟಿಟ್ ಅವರು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಚಿತ್ರಗಳಲ್ಲಿ, ಮಹಾ ಕುಂಭಮೇಳದ ಭವ್ಯ ದೀಪಾಲಂಕಾರ ಮತ್ತು ಭಕ್ತರ ಅಪಾರ ಜನಸಮೂಹವು ಗಂಗಾ ನದಿಯ ದಡವನ್ನು ಒಂದು ವಿಶಿಷ್ಟ ದೃಶ್ಯವಾಗಿ ಪರಿವರ್ತಿಸಿದೆ. ಬಾಹ್ಯಾಕಾಶದಿಂದ ತೆಗೆದ ಈ ಚಿತ್ರಗಳು ಭೂಮಿಯ ಮೇಲಿನ ಈ ಧಾರ್ಮಿಕ ಕಾರ್ಯಕ್ರಮದ ಭವ್ಯತೆಯನ್ನು ತೋರಿಸುತ್ತವೆ.

ಡಾನ್ ಪೆಟಿಟ್ ಅವರು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ತೆಗೆದ ಚಿತ್ರಗಳಲ್ಲಿ ೨೦೨೫ರ ಮಹಾ ಕುಂಭಮೇಳದ ಅದ್ಭುತ ನೋಟ ಕಂಡುಬಂದಿದೆ ಹಾಗೂ ಜಗತ್ತಿನ ಅತಿದೊಡ್ಡ ಮಾನವ ಸಭೆ ಗಂಗಾ ನದಿಯ ದಡದಲ್ಲಿ ದೀಪಗಳಿಂದ ಹೊಳೆಯುತ್ತಿತ್ತು ಎಂದು ಬರೆದಿದ್ದಾರೆ.

****************

ಅಮೆರಿಕನ್ ಗಗನಯಾತ್ರಿ ಡೊನಾಲ್ಡ್ ರಾಯ್ ಪೆಟ್ಟಿಟ್ ಅವರು ತಮ್ಮ ಖಗೋಳ ಛಾಯಾಗ್ರಹಣ ಮತ್ತು ಕಕ್ಷೆಯಲ್ಲಿನ ನಾವೀನ್ಯತೆಗಾಗಿ ಹೆಸರುವಾಸಿಯಾಗಿದ್ದಾರೆ. ನಾಳೆ ಮೌನಿ ಅಮಾವಾಸ್ಯೆಯ ಹಿನ್ನೆಲೆಯಲ್ಲಿ, ಪ್ರಯಾಗರಾಜ್‌ನಲ್ಲಿ ನಡೆಯುವ ಮಹಾಕುಂಭದಲ್ಲಿ ಭಾಗವಹಿಸುವ ಭಕ್ತರು ಮತ್ತು ಯಾತ್ರಾರ್ಥಿಗಳಿಗೆ ಉತ್ತಮ ಆರೋಗ್ಯ ವ್ಯವಸ್ಥೆಯನ್ನು ಮಾಡಲಾಗಿದೆ.

ಯಾವುದೇ ಆರೋಗ್ಯ ತುರ್ತು ಪರಿಸ್ಥಿತಿಯನ್ನು ಎದುರಿಸಲು ಪರೇಡ್ ಮೈದಾನದಲ್ಲಿರುವ ಸೆಂಟ್ರಲ್ ಆಸ್ಪತ್ರೆ ಸಂಪೂರ್ಣವಾಗಿ ಸಜ್ಜಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ಧ್ವನಿ: ಬಾತ್ಮೀದಾರರು

ಮಹಾ ಕುಂಭಮೇಳವು ಜಗತ್ತಿನ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ. ಇದರಲ್ಲಿ ಲಕ್ಷಾಂತರ ಭಕ್ತರು ಗಂಗಾ ನದಿಯಲ್ಲಿ ಸ್ನಾನ ಮಾಡುವ ಮೂಲಕ ಆಧ್ಯಾತ್ಮಿಕ ಶಾಂತಿಯನ್ನು ಪಡೆಯುತ್ತಾರೆ. ಇಲ್ಲಿಯವರೆಗೆ, ೧೩ ಕೋಟಿಗೂ ಹೆಚ್ಚು ಭಕ್ತರು ಸಂಗಮದಲ್ಲಿ ಸ್ನಾನ ಮಾಡುವ ಮೂಲಕ ಧಾರ್ಮಿಕ ಭಾವನೆಯೊಂದಿಗೆ ಪುನೀತರಾಗಿದ್ದಾರೆ. ಮಹಾ ಕುಂಭಮೇಳದ ಮೊದಲ ಅಮೃತ ಸ್ನಾನ ಜನವರಿ ೧೩ರಂದು ನಡೆಯಿತು. ಎರಡನೇ ಅಮೃತ ಸ್ನಾನವು ನಾಳೆ ಅಂದರೆ ಜನವರಿ ೨೯ರಂದು ಮೌನಿ ಅಮಾವಾಸ್ಯೆಯಂದು ನಡೆಯಲಿದೆ. ಮಹಾ ಕುಂಭಮೇಳ ಫೆಬ್ರವರಿ ೨೬ ರಂದು ಕೊನೆಗೊಳ್ಳಲಿದೆ.

*****************

ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ಇಂದು ನಡೆಯಲಿದೆ.

ಗುಜರಾತ್‌ನ ರಾಜ್‌ಕೋಟ್‌ನಲ್ಲಿರುವ ನಿರಂಜನ್ ಷಾ ಕ್ರೀಡಾಂಗಣದಲ್ಲಿ ಈ ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ.

ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ ಐದು ಪಂದ್ಯಗಳ ಸರಣಿಯಲ್ಲಿ ೨-೦ ಮುನ್ನಡೆ ಸಾಧಿಸಿದೆ.

ಸರಣಿಯ ಆರಂಭಿಕ ಪಂದ್ಯದಲ್ಲಿ, ಕೋಲ್ಕತ್ತಾದಲ್ಲಿ ಭಾರತ ತಂಡ ಏಳು ವಿಕೆಟ್‌ಗಳಿಂದ ಇಂಗ್ಲೆಂಡ್ ಅನ್ನು ಸೋಲಿಸಿತು.

ಚೆನ್ನೈನ ಎಂಎ ಚಿದಂಬರಂ ಸ್ಟೇಡಿಯಂನಲ್ಲಿ ನಡೆದ ಎರಡನೇ ಟಿ೨೦ ಪಂದ್ಯದಲ್ಲಿ ಭಾರತ ಎರಡು ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿತು.

ಈಗಾಗಲೇ ಎರಡು ಪಂದ್ಯ ಗೆದ್ದಿರುವ ಭಾರತ ತಂಡ ಮೂರನೇ ಪಂದ್ಯದಲ್ಲೂ ಜಯ ಗಳಿಸಿ ಸರಣಿಯನ್ನು ತನ್ನದಾಗಿಸಿಕೊಳ್ಳುವ ಆತ್ಮವಿಶ್ವಾಸ ಹೊಂದಿದೆ.

*****************

ಒಡಿಶಾದ ರೂರ್ಕೆಲಾದ ಬಿರ್ಸಾ ಮುಂಡಾ ಹಾಕಿ ಸ್ಟೇಡಿಯಂನಲ್ಲಿ ನಡೆದ ಪುರುಷರ ಹಾಕಿ ಇಂಡಿಯಾ ಲೀಗ್‌ನಲ್ಲಿ ಸೂರ್ಮಾ ಹಾಕಿ ಕ್ಲಬ್ ವೇದಾಂತ ಕಳಿಂಗ ಲ್ಯಾನ್ಸರ್ಸ್ ವಿರುದ್ಧ ೫-೩ ಗೋಲುಗಳ ಅಂತರದಲ್ಲಿ ಗೆಲುವು ಸಾಧಿಸಿದೆ.

*********ಮುಕ್ತಾಯ********